**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಯು ಬಿ ವೆಂಕಟೇಶ್ ನಿಯಮ 330 ರಡಿ ಗಮನ ಸೆಳೆಯುವ ಸೂಚನೆ:**

**ಸೂಚನೆ**

ತುಮಕೂರು ತಾಲ್ಲೂಕಿನ ಮಲ್ಲೇನಹಳ್ಳಿ ಗ್ರಾಮದಲ್ಲಿ ಮೌಢ್ಯ ಆಚರಣೆ ಜಾರಿಯಲ್ಲಿದ್ದು ಹೆರಿಗೆ ನಂತರ ಊರ ಹೊರಗಿನ ಗುಡಿಸಲಿನಲ್ಲಿ ಬಾಣಂತಿ ಮತ್ತು ಮಗುವನ್ನು ಇಡಲಾಗಿದ್ದ ಪರಿಣಾಮ ನವಜಾತು ಶಿಶು ಅನಾರೋಗ್ಯದಿಂದ ಸಾವನ್ನಪ್ಪಿರುವ ಪ್ರಕರಣ ಜರುಗಿದ್ದು, ಇಂತಹ ಅನಿಷ್ಠ ಪದ್ಧತಿಯನ್ನು ಹೋಗಲಾಡಿಸಲು ಕಠಿಣ ಕಾನೂನು ಜಾರಿಗೆ ತರಲು ಮುಂದಾಗಬೇಕೆನ್ನುವ ವಿಷಯವನ್ನು ನಿಯಮ 330ರಡಿ ಮಾನ್ಯ ಸಮಾಜ ಕಲ್ಯಾಣ ಸಚಿವರಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

**ಉತ್ತರ.**

ದುಷ್ಟ ಮತ್ತು ದುರಾಚಾರಗಳಿಂದ (Sinister) ಸಮಾಜದಲ್ಲಿನ ಸಾಮಾನ್ಯ ಜನರನ್ನು ರಕ್ಷಿಸುವ ದೃಷ್ಟಿಯಿಂದ ಕರ್ನಾಟಕ ಅಮಾನವೀಯ ದುಷ್ಟ ಪದ್ಧತಿಗಳು ಹಾಗೂ ವಾಮಾಚಾರ ಇವುಗಳ ಪ್ರತಿಬಂಧ ಮತ್ತು ನಿರ್ಮೂಲನೆ ವಿಧೇಯಕ 2017 ನ್ನು ಜಾರಿಗೆ ತರಲಾಗಿದೆ. ಈ ಅಧಿನಿಯಮದ ಕಲಂ (3) (1) ಅಮಾನವೀಯ ದುಷ್ಟ ಪದ್ಧತಿಗಳು ಹಾಗೂ ವಾಮಾಚಾರದ ಪ್ರತಿಬಂಧ ಮತ್ತು ನಿರ್ಮೂಲನೆ (1) ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಲಾದ ಅಮಾನವೀಯ ದುಷ್ಟ ಪದ್ಧತಿಗಳು ಮತ್ತು ವಾಮಾಚಾರಗಳನ್ನು ಯಾವೊಬ್ಬ ವ್ಯಕ್ತಿಯು ತಾನಾಗಿಯೇ ಆಗಲಿ ಅಥವಾ ಮತ್ತೊಬ್ಬ ವ್ಯಕ್ತಿಯ ಮೂಲಕವಾಗಿಯಾಗಲಿ ಮಾಡತಕ್ಕದ್ದಲ್ಲ, ಪ್ರೋತ್ಸಾಹಿಸತಕ್ಕದ್ದಲ್ಲ, ಪ್ರಚಾರ ಮಾಡತಕ್ಕದ್ದಲ್ಲ ಅಥವಾ ಆಚರಿಸತಕ್ಕದ್ದಲ್ಲ ಅಥವಾ ಪ್ರೋತ್ಸಾಹಿಸುವಂತೆ, ಪ್ರಸಾರ ಮಾಡುವಂತೆ ಅಥವಾ ಪ್ರಚಾರಿಸುವಂತೆ ಮಾಡತಕ್ಕದ್ದಲ್ಲವೆಂದು ಇರುತ್ತದೆ.

ಮೇಲಿನ ಅಧಿನಿಯಮದ ಕಲಂ (3) (2) ರಲ್ಲಿ ಅಪರಾಧದ ತಪ್ಪಿತಸ್ಥ ವ್ಯಕ್ತಿಗೆ ಒಂದು ವರ್ಷಕ್ಕೆ ಕಡಿಮೆಯಿಲ್ಲದ ಗರಿಷ್ಠ 7 ವರ್ಷಗಳವರೆಗೆ ವಿಸ್ತರಿಸಬಹುದಾದ ಅವಧಿಯ ಕಾರಾವಾಸದಿಂದ ಮತ್ತು ಐದು ಸಾವಿರ ರೂಪಾಯಿಗಳಿಗೆ ಕಡಿಮೆಯಿಲ್ಲದ ಗರಿಷ್ಠ ಐವತ್ತು ಸಾವಿರ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ದಂಡವನ್ನು ವಿಧಿಸಲು ಅವಕಾಶ ಕಲ್ಪಿಸಲಾಗಿದೆ.

ಮೇಲಿನ ಅಧಿನಿಯಮದ ಅನುಸೂಚಿ ಕ್ರಮ ಸಂಖ್ಯೆ 10ರಲ್ಲಿ ಪ್ರತ್ಯೇಕವಾಗಿರುವಂತೆ ಒತ್ತಾಯಿಸುವ, ಗ್ರಾಮದೊಳಗೆ ಪುನರ್-ಪ್ರವೇಶವನ್ನು ನಿಷೇಧಿಸುವ ಮೂಲಕ ಮಹಿಳೆಯ ವಿರುದ್ಧ ದುಷ್ಟಪದ್ಧತಿಗಳನ್ನು ಆಚರಿಸುವುದು ಅಥವಾ ಋತುಮತಿಯಾದ ಅಥವಾ ಗರ್ಭಿಣಿಯಾದ ಸ್ತ್ರೀಯನ್ನು ಒಂಟಿಯಾಗಿರುವಂತೆ ಒಳಪಡಿಸುವುದನ್ನು ನಿರ್ಬಂಧಿಸಲಾಗಿದೆ.

ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ, ಈಗಾಗಲೇ ತುಮಕೂರು ಜಿಲ್ಲೆ ತುಮಕೂರು ತಾಲ್ಲೂಕು ಕೋರಾ ಪೊಲೀಸ್ ಠಾಣೆಯಲ್ಲಿ ಪ್ರಕರಣಕ್ಕೆ ಕಾರಣರಾದವರ ವಿರುದ್ಧ ದಿನಾಂಕ:27-07-2023ರಂದು ಅಪರಾಧ ಶಿಶು ಸಂಖ್ಯೆ:0098/2023ರಂತೆ ಎಫ್.ಐ.ಆರ್ ದಾಖಲಾಗಿರುತ್ತದೆ.

ಕರ್ನಾಟಕ ಅಮಾನವೀಯ ದುಷ್ಟ ಪದ್ಧತಿಗಳು ಹಾಗೂ ವಾಮಾಚಾರ ಇವುಗಳ ಪ್ರತಿಬಂಧ ಮತ್ತು ನಿರ್ಮೂಲನೆ ನಿಯಮಗಳು 2020 ರಲ್ಲಿ ಜಾರಿಗೆ ತರಲಾಗಿದೆ. ಈ ನಿಯಮದಂತೆ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳನ್ನೊಳಗೊಂಡ ಮತ್ತು ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳನ್ನೊಳಗೊಂಡ ಜಾಗೃತಿ ಸಮಿತಿಗಳನ್ನು ರಚಿಸಿ ಮೌಢ್ಯಾಚರಣೆಯ ಬಗ್ಗೆ ಅರಿವು ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತದೆ.

ನ-72 = 08

ಮುಂದುವರೆದು, ಅಧಿನಿಯಮ ಕಲಂ 6 ರಂತೆ ಪೊಲೀಸ್ ಅಧಿಕಾರಿಗಳು ಜಾಗೃತ ಅಧಿಕಾರಿಗಳಾಗಿರುತ್ತಾರೆ ಹಾಗೂ ಮೌಡ್ಯಾಚರಣೆಗಳ ವಿರುದ್ಧ ಕ್ರಮ ಕೈಗೊಳ್ಳುತ್ತಿದ್ದಾರೆ.

**ಸಕಇ 498 ಎಸ್‌ಎಲ್ ಪಿ 2023**

**(ಡಾ ಹೆಚ್.ಸಿ ಮಹದೇವಪ್ಪ)**
ಸಮಾಜ ಕಲ್ಯಾಣ ಸಚಿವರು